## 82. ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ಎನ್.ಪಿ.ಎಸ್. ಯೋಜನೆ ಜಾರಿ

ಸಚಿವ ಸುಧಾಕರ್ ಅವರು ಅಧಿಕಾರವಹಿಸಿಕೊಂಡ ಬಳಿಕ ಅವರನ್ನು ನಿಯೋಗದಲ್ಲಿ ಭೇಟಿ ಮಾಡಿದ್ದ ಇಲಾಖೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು, ಪಿಂಚಣಿ ಯೋಜನೆ ಜಾರಿಗೆ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಮನವಿ ಸಲ್ಲಿಸಿದ್ದರು. ಮನವಿ ಸ್ವೀಕರಿಸಿದ್ದ ಸಚಿವರು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದ್ದರು.

ವೈದ್ಯಕೀಯ ಶಿಕ್ಷಣ ಇಲಾಖೆಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಯ ಬಹುದಿನಗಳ ಬೇಡಿಕೆಯಾಗಿದ್ದ ಪಿಂಚಣಿ ಯೋಜನೆಗೆ (ಎನ್‌ಪಿಎಸ್) ಸಚಿವ ಡಾ: ಕೆ.ಸುಧಾಕರ್ ಹಸಿರು ನಿಶಾನೆ ತೋರಿದ್ದಾರೆ.

ಸರ್ಕಾರಿ ವೈದ್ಯ, ದಂತ ವೈದ್ಯಕೀಯ ಕಾಲೇಜು, ಇವುಗಳಿಗೆ ಹೊಂದಿಕೊಂಡಂತಿರುವ ಬೋಧಕ ಆಸ್ಪತ್ರೆಗಳು ಮತ್ತು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ಕಾಯಂ ಆಗಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಈ ಯೋಜನೆ ಲಾಭ ಪಡೆಯಲಿದ್ದಾರೆ.

ಅನೇಕ ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಈ ಬೇಡಿಕೆಗೆ ಅನುಮೋದನೆ ನೀಡುವಂತೆ ಸಚಿವ ಸುಧಾಕರ್ ಅವರು ಮುಖ್ಯಮಂತ್ರಿ ಅವರನ್ನು ಭೇಟಿಯಾಗಿ ಮನವರಿಕೆ ಮಾಡಿಕೊಡುವಲ್ಲಿ ಯಶಸ್ವಿಯಾಗಿದ್ದಾರೆ. ಈ ಕುರಿತು ವೈದ್ಯಕೀಯ ಶಿಕ್ಷಣ ಇಲಾಖೆ ಸಲ್ಲಿಸಿದ್ದ ಪ್ರಸ್ತಾವನೆಗೆ ಹಣಕಾಸು ಇಲಾಖೆ ಅನುಮೋದನೆ ನೀಡಿದ್ದು ಅಧಿಕೃತ ಆದೇಶ ಹೊರಬಿದ್ದಿದೆ.

ಒಟ್ಟು 27 ಸಂಸ್ಥೆಗಳಲ್ಲಿ ಕಾಯಂ ಆಗಿ ಕರ್ತವ್ಯ ನಿರ್ವಹಿಸುತ್ತಿರುವ 5949 ಅಧಿಕಾರಿ ಮತ್ತು ಸಿಬ್ಬಂದಿಗೆ ಈ ಯೋಜನೆಯಿಂದ ಪ್ರಯೋಜನ ದೊರಕಲಿದೆ. ಇದರಲ್ಲಿ 2061 ಮಂದಿ ಎಐಸಿಟಿಇ ಅನುಮೋದನೆ ಪಡೆದ ಹುದ್ದೆಗಳಾಗಿದ್ದರೆ 3888 ಎಐಸಿಟಿಇಯೇತರ ಹುದ್ದೆಗಳಾಗಿವೆ. ಈ ನೂತನ ಯೋಜನೆಯಿಂದ ಸರ್ಕಾರಕ್ಕೆ ಪ್ರತಿ ವರ್ಷ ರೂ.77.27 ಕೋಟಿ ಹೆಚ್ಚುವರಿ ಹೊರೆ ಬೀಳಲಿದೆ. 2006ರ ಏಪ್ರಿಲ್ 1 ರ ನಂತರ ಕಾಯಂ ಆಗಿ ನೇಮಕಗೊಂಡು ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ವೃಂದದ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ತಕ್ಷಣದಿಂದಲೇ ನೂತನ ಪಿಂಚಣಿ ಯೋಜನೆ ಜಾರಿಯಾಗಲಿದೆ ಎಂದು ಇಲಾಖೆ ಅಧಿಕಾರಿಗಳು ತಿಳಿಸಿರುತ್ತಾರೆ.

ಆಧಾರ:ವಿಶ್ವವಾಣಿ, ದಿನಾಂಕ:28.08.2020